# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ/2020–21 ದಿನಾಂಕ : 17–03–2021

## –: ಸಭಾ ಸೂಚನಾ ಪತ್ರ :–

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020–21 ದಿನಾಂಕ : 21–09–2020.

–****–

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪ ವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ–59 ಮಾರುತಿ ಸೇವಾನಗರ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆಯಲ್ಲಿರುವ ಉದ್ಯಾನವನದಲ್ಲಿ ದಿನಾಂಕ: 20–03–2021 ರಂದು ಬೆಳಿಗ್ಗೆ 11.00 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಿದೆ.

## –: ಸಭಾ ಅಜೆಂಡಾ :–

| | |
|---|---|
| 1 | ಹಿಂದಿನ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2 | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ. |
| 3 | ವಾರ್ಡ್ ವ್ಯಾಪ್ತಿಯ ಕಾಮಗಾರಿಗಳು, ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ. |
| 4 | ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಮತ್ತು ಮಳೆ ನೀರಿನ ಸಮಸ್ಯೆಯ ಬಗ್ಗೆ ಚರ್ಚಿಸುವ ವಿಚಾರ. |
| 5 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಬಗ್ಗೆ ಚರ್ಚಿಸುವ ಬಗ್ಗೆ. |
| 6 | ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಚಾರಗಳು |

(ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ)

ಸಹಿ/–

ಕಾರ್ಯದರ್ಶಿ ವಾರ್ಡ್ ಸಮಿತಿ–59

ಹಾಗೂ ಸಹಾಯಕ ಅಭಿಯಂತರರು,

ವಾರ್ಡ್–59

**ಪ್ರತಿಯನ್ನು**

1. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.

ಪು.ತಿ.ನೋ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಕಛೇರಿ ಸಭಾಂಗಣದಲ್ಲಿ ದಿನಾಂಕ: 20-03-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ.ಶ್ರೀಕಾಂತ್, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ ಎ.ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
4. ಎ.ಆರ್.ಸುರೇಶ್, ರಿವ್ಹೋಬ್ ಅಸೋಸಿಯೇಷನ್

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ಸಿ.ಎಂ ವೆಂಕಟೇಶ್ ತೋಟಗಾರಿಕಾ ಇಲಾಖೆ,
2. ಶ್ರೀ ನಾಗರಾಜ್ ಜಿ.ವಿ ಅಸೆಸ್ಸರ್,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಮಾಹಿತಿ | ಕ್ರಮ |
|---|---|---|
| i | ಬೀದಿ ದೀಪಗಳ ನಿರ್ವಹಣೆ (**Street Light**) | |
| | ವಾರ್ಡ್ ವ್ಯಾಪ್ತಿಯಲ್ಲಿರುವ ಉದ್ಯಾನವನಗಳ ನಿರ್ವಹಣೆ ಕಾಮಗಾರಿಯನ್ನು ನಿರ್ವಹಿಸಲು ಹಾಗೂ ಉದ್ಯಾನವನಗಳಲ್ಲಿ ಸ್ಟ್ರೀಟ್ ಲೈಟ್‌ಗಳು ಸರಿಯಾಗಿ ಉರಿಯದೇ ಇರುವ ಹಾಗೂ ಕೆಲವು ಪ್ರದೇಶಗಳಲ್ಲಿ ಬೀದಿ ದೀಪಗಳ ಅವಶ್ಯಕತೆ ಇದ್ದು, ಕೂಡಲೇ ಅಂತಹ ಸ್ಥಳಗಳಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಸಭೆಗೆ ತಿಳಿಸಿದರು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿರುವ ಬೀದಿ ದೀಪಗಳಿಗೆ ಸಂಬಂಧಿಸಿದ ಕುಂದು ಕೊರತೆಗಳನ್ನು ಆಗಿಂದ್ದಾಗ್ಗೆ ಬಗೆಹರಿಸಲು ಬೀದಿ ದೀಪಗಳ ನಿರ್ವಹಣೆ ಇಲಾಖೆಯ ಸಹಾಯಕ ಅಭಿಯಂತರರು ಕಡ್ಡಾಯವಾಗಿ ಹಾಜರಿರುವ ಬಗ್ಗೆ ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಬೀದಿ ದೀಪಗಳ ನಿರ್ವಹಣೆ (**Street Light**) ರವರು ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯು ಸರ್ವಾನುಮತದಿಂದ ಸೂಚಿಸಿತು. |
| ii | ಬಿಡಬ್ಲೂಎಸ್‌ಎಸ್‌ಬಿ (**BWSSB Dept**) | |
| | ವಾರ್ಡ್ ವ್ಯಾಪ್ತಿಯ ಡಿ ಕೋಸ್ಟಾ ಲೇಔಟ್ ಹಾಗೂ ಮಿಲಿಟರಿ ಕಾಂಪೌಂಡ್‌ನಲ್ಲಿ ನೀರಿನ ಪೈಪ್‌ಲೈನ್ ಹಾಳಾಗಿದ್ದು, ನೀರು ಪೋಲಾಗುತ್ತಿರುವುದರಿಂದ, ಸಾರ್ವಜನಿಕರಿಗೆ ನೀರಿನ ತೊಂದರೆಯಾಗುವುದಾಗಿ, ಸದರಿ ಪ್ರದೇಶದಲ್ಲಿ ಹೊಡೆದ ಪೈಪ್‌ಲೈನ್‌ನ್ನು ದುರಸ್ಥಿಪಡಿಸಲು ಸಭೆಗೆ ತಿಳಿಸಿದರು. | ಬಿಡಬ್ಲೂಎಸ್‌ಎಸ್‌ಬಿ (**BWSSB Dept**) ರವರು ಈ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು. |

| | | |
|---|---|---|
| iii | ಕಾಮಗಾರಿ ಇಲಾಖೆ (**Engineering Dept**) | |
| | ವಾರ್ಡ್ ವ್ಯಾಪ್ತಿಯ ಅನೇಕ ಕಡೆಗಳಲ್ಲಿ ಏರ್‌ಟೆಲ್ ಕಂಪನಿಯವರು ರಸ್ತೆಗಳನ್ನು ಅಗೆದು ಕೇಬಲ್ ಅಳವಡಿಸುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಸದರಿಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. | ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಕತ್ತರಿಸುತ್ತಿರುವ ಸಂಸ್ಥೆಯವರಿಗೆ ನೋಟೀಸ್ ನೀಡಿ, ಸೂಕ್ತ ಕ್ರಮ ವಹಿಸಲು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಅಭಿಯಂತರರಿಗೆ ತಿಳಿಸಿದರು. |
| | ಕಾಮಗಾರಿ ಇಲಾಖೆ (**Engineering Dept**) | |
| | ವಾರ್ಡ್ ವ್ಯಾಪ್ತಿಯಲ್ಲಿ ಅವಶ್ಯವಿರುವ ಪ್ರದೇಶಗಳಲ್ಲಿ ಪಾಲಿಕೆ ವತಿಯಿಂದ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಈ ವರೆವಿಗೂ ಯಾವುದೇ ಕ್ರಮ ಕೈಗೊಳ್ಳದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು. | ಕಾಮಗಾರಿ ಇಲಾಖೆ (**Engineering Dept**) ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಅಭಿಯಂತರರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಗುತ್ತಿಗೆದಾರರು ಕೆಲಸವನ್ನು ಪ್ರಾರಂಭಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಲಾಯಿತು. |
| | ಘನತ್ಯಾಜ್ಯ ನಿರ್ವಹಣೆ (**SWM Department**) | |
| | ವಾರ್ಡ್ ವ್ಯಾಪ್ತಿಯಲ್ಲಿ ಮನೆ ಮನೆಗಳಿಂದ ಕಸ ಸಂಗ್ರಹಣೆ ಹಾಗೂ ವಿಲೇವಾರಿ ಕಾರ್ಯದ ಬಗ್ಗೆ ಈ ಹಿಂದಿನ ಸಭೆಗಳಲ್ಲಿ ರಿವಾಜೆ ಅಸೋಸಿಯೇಷನ್ ರವರು ಅಸಮಧಾನ ವ್ಯಕ್ತಪಡಿಸಿ, ಈ ಬಗ್ಗೆ ಸೂಕ್ತ ಕ್ರಮ ವಹಿಸಲು ಸಭೆಯ ಗಮನಕ್ಕೆ ತಂದಿದ್ದರಿಂದ, ಸಭೆಯಲ್ಲಿ ಹಾಜರಿದ್ದ ಘನತ್ಯಾಜ್ಯ ನಿರ್ವಹಣೆ ವಿಭಾಗದ ಅಧಿಕಾರಿಗಳು ಗುತ್ತಿಗೆದಾರರಿಗೆ ನೋಟೀಸ್ ನೀಡಿದ್ದರಿಂದ ಪ್ರಸ್ತುತ ಸಮರ್ಪಕವಾಗಿ ದಿನನಿತ್ಯ ಮನೆ ಮನೆಗಳಿಂದ ಕಸವನ್ನು ಸಂಗ್ರಹಿಸಿ ವಿಲೇವಾರಿ ಕಾರ್ಯವನ್ನು ನಿರ್ವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು. | ಘನತ್ಯಾಜ್ಯ ನಿರ್ವಹಣೆ (**SWM Department**) ರವರು ಈ ಬಗ್ಗೆ ಕ್ರಮ ವಹಿಸಲು ಸೂಚಿಸಲಾಯಿತು. |
| | ಘನತ್ಯಾಜ್ಯ ನಿರ್ವಹಣೆ (**SWM Department**) | |
| | ವಾರ್ಡ್ ವ್ಯಾಪ್ತಿಯ ಮಿಲ್ಲರ್ಸ್ ಸ್ಟ್ರೀಟ್ ಹಾಗೂ ಇತರೆ ಪ್ರದೇಶಗಳಲ್ಲಿ ಪೌರ ಕಾರ್ಮಿಕರು ದಿನನಿತ್ಯ ಮನೆ ಮನೆಗಳಿಂದ ಕಸ ಸಂಗ್ರಹಣೆಗೆ ಬರದೇ ಇರುವುದು ಕಂಡು ಬಂದಿದ್ದು, ಇದರಿಂದ ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಬಿಸಾಡುತ್ತಿರುವುದರಿಂದ ಸದರಿ ಪ್ರದೇಶಗಳಲ್ಲಿ ಪಾಲಿಕೆಯ ಪೌರ ಕಾರ್ಮಿಕರು ದಿನನಿತ್ಯ ಮನೆ ಮನೆಗಳಿಂದ ಕಸವನ್ನು ಸಮರ್ಪಕವಾಗಿ ಸಂಗ್ರಹಿಸಿ ವಿಲೇವಾರಿ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಘನತ್ಯಾಜ್ಯ ನಿರ್ವಹಣೆ (**SWM Department**) ಈ ಬಗ್ಗೆ ಕ್ರಮ ವಹಿಸಲು ಸೂಚಿಸಿದರು. |

| ಘನತ್ಯಾಜ್ಯ ನಿರ್ವಹಣೆ (SWM Department) | |
|---|---|
| ವಾರ್ಡ್ ವ್ಯಾಪ್ತಿಯ ಕೆಲವು ಪ್ರದೇಶಗಳಲ್ಲಿರುವ ರಸ್ತೆ ಹಾಗೂ ಖಾಲಿ ನಿವೇಶನಗಳಲ್ಲಿ ಕಸವನ್ನು ಬಿಸಾಡುತ್ತಿರುವುದು ಕಂಡು ಬಂದಿದ್ದು, ಅಂತಹ ಸ್ಥಳಗಳಲ್ಲಿ ಸಾರ್ವಜನಿಕರಿಗೆ ಕಸವನ್ನು ರಸ್ತೆ ಅಥವಾ ಖಾಲಿ ನಿವೇಶನಗಳಲ್ಲಿ ಬಿಸಾಡದಂತೆ ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆಯ ಗಮನಕ್ಕೆ ತಂದು ಅಂತಹ ವ್ಯಕ್ತಿಗಳಿಗೆ ಸೂಕ್ತ ದಂಡ ವಿಧಿಸಲು ಸಭೆಗೆ ತಿಳಿಸಿದರು. | **AEE-SWM** ರವರಿಗೆ ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆದಾರರು ತಮ್ಮ ಆಟೋ ಟಿಪ್ಪರ್‌ಗಳಿಗೆ ಕಡ್ಡಾಯವಾಗಿ ಮೈಕ್ ಅಳವಡಿಸಿ ಜಾಗೃತಿ ಮೂಡಿಸಲು ಹಾಗೂ ಮನೆ ಮನೆಗಳಿಂದ ಕಸ ಸಂಗ್ರಹಣೆ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಲು ಸಭೆಯಲ್ಲಿ ತಿಳಿಸಲಾಯಿತು. |
| **ಕಾಮಗಾರಿ ಇಲಾಖೆ (Engineering Dept)** | |
| ವಾರ್ಡ್ ವ್ಯಾಪ್ತಿಯ ಲಾಯ್ಡ್ ರಸ್ತೆ ಮತ್ತು ಮ್ಯಾಕ್ ಪರ್ಸನ್ ರಸ್ತೆಗಳಲ್ಲಿ ಕೆಲವು ಪ್ರದೇಶಗಳಲ್ಲಿ ರಸ್ತೆಗಳ ಮೇಲೆ ಕಟ್ಟಡ ನಿರ್ಮಾಣದ ಸಾಮಗ್ರಿಗಳನ್ನು ಹಾಕಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಅಂತಹ ಕಟ್ಟಡದ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದರು. ಹಾಗೂ ಇತ್ತೀಚೆಗೆ ಬೈಲಾಗಳನ್ನು ಉಲ್ಲಂಘಿಸಿ ಕಟ್ಟಡ ನಿರ್ಮಾಣ ಮಾಡುತ್ತಿರುವುದು ಕಂಡು ಬಂದಿದ್ದು, ಇದನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಯ ಗಮನಕ್ಕೆ ತರಲಾಯಿತು. | **ಕಾಮಗಾರಿ ಇಲಾಖೆ (Engineering Dept) ರವರು ಈ ಬಗ್ಗೆ ಕ್ರಮ ವಹಿಸಲು ಸೂಚಿಸಿದರು.** |
| **ಆರೋಗ್ಯಾಧಿಕಾರಿಗಳು** | |
| ಮಾನ್ಯ ಅಧ್ಯಕ್ಷರು ಮಾತನಾಡಿ ಪ್ರಸ್ತುತ ವಾರ್ಡ್ ವ್ಯಾಪ್ತಿಯಲ್ಲಿರುವ ಕೊವಿಡ್-19 ಸಕ್ರಿಯ ಪ್ರಕರಣ ಹಾಗೂ ಇತರೆ ಮಾಹಿತಿಯ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು. | ಆರೋಗ್ಯಾಧಿಕಾರಿಗಳು ಮಾತನಾಡಿ ಪ್ರಸ್ತುತ ವಾರ್ಡ್ ವ್ಯಾಪ್ತಿಯಲ್ಲಿ ದಿನನಿತ್ಯ ಸುಮಾರು 4–5 ಕೋವಿಡ್ ಪಾಸಿಟಿವ್ ಪ್ರಕರಣಗಳು ಬರುತ್ತಿದ್ದು, ಇದನ್ನು ತಡೆಗಟ್ಟಲು ಕ್ರಮ ವಹಿಸಬೇಕಾಗಿ ಸಭೆಗೆ ತಿಳಿಸಿದರು. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

***ಪ್ರತಿಯನ್ನು***

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ / ಕಛೇರಿ ಕಡತಕ್ಕೆ.